## ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಿ.ಎನ್ ಮಂಜೇಗೌಡ ರವರ ನಿಯಮ 72 ರ ಗಮನ ಸೆಳೆಯುವ ಸೂಚನೆಗೆ ಉತ್ತರ.

### ಸೂಚನೆ.

ರಾಜ್ಯಾದ್ಯಂತ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗಗಳಿಗೆ ಸೇರಿದ ವಿದ್ಯಾರ್ಥಿಗಳ ವಸತಿ ನಿಲಯಗಳಲ್ಲಿ ಅವಶ್ಯ ಮೂಲಭೂತ ಸೌಕರ್ಯಗಳಿಲ್ಲದಿರುವ ಕುರಿತು ನಿಯಮ 72ರ ಅಡಿಯಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

### ಉತ್ತರ.

ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ವಿದ್ಯಾರ್ಥಿನಿಲಯಗಳ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ಸಂಖ್ಯೆ | | |
|---|---|---|---|---|
| | | ಸಮಾಜ ಕಲ್ಯಾಣ ಇಲಾಖೆ | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 1215 | 135 | 1246 |
| 2 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 713 | 149 | 1351 |
| | **ಒಟ್ಟು** | **1928** | **284** | **2597** |

ವಿದ್ಯಾರ್ಥಿ ನಿಲಯಗಳ ದಾಖಲಾತಿ ವಿವರ ಈ ಕೆಳಕಂಡಂತಿದೆ.

| ಕ್ರ.ಸಂ | ನಿಲಯಗಳ ವಿವರ | ವಿದ್ಯಾರ್ಥಿ ನಿಲಯಗಳ ದಾಖಲಾತಿ ಸಂಖ್ಯೆ | | |
|---|---|---|---|---|
| | | ಸಮಾಜ ಕಲ್ಯಾಣ ಇಲಾಖೆ | ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ |
| 1 | ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳು | 101475 | 10911 | 67358 |
| 2 | ಮೆಟ್ರಿಕ್ ನಂತರ ವಿದ್ಯಾರ್ಥಿ ನಿಲಯಗಳು | 118699 | 18956 | 177083 |
| | **ಒಟ್ಟು** | **220174** | **29867** | **244441** |

**ಸಮಾಜ ಕಲ್ಯಾಣ ಇಲಾಖೆಯ** ವತಿಯಿಂದ ಒಟ್ಟು 1939 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, ಕಟ್ಟಡಗಳ ವಿವರ ಈ ಕೆಳಕಂಡಂತಿದೆ.

| ವಿದ್ಯಾರ್ಥಿ ನಿಲಯಗಳ ಸಂಖ್ಯೆ | ಸ್ವಂತ ಕಟ್ಟಡ | ಬಾಡಿಗೆ/ ಬಾಡಿಗೆ ರಹಿತ | ನಿರ್ಮಾಣ ಹಂತ | ನಿವೇಶನ ಲಭ್ಯ | ನಿವೇಶನ ರಹಿತ |
|---|---|---|---|---|---|
| 1939 | 1669 | 270 | 196 | 47 | 27 |

ಮೇಲ್ಕಂಡಂತೆ ಬಾಡಿಗೆ ಕಟ್ಟಡಗಳಲ್ಲಿ ನಡೆಸುತ್ತಿರುವ 270 ವಿದ್ಯಾರ್ಥಿ ನಿಲಯಗಳ ಪೈಕಿ 196 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. 47 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳು ಲಭ್ಯವಿದ್ದು, ಪ್ರಸಕ್ತ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. ಬಾಕಿ 27 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳನ್ನು ಪಡೆಯಬೇಕಾಗಿದ್ದು, ಸೂಕ್ತ ನಿವೇಶನಗಳು ದೊರೆತ ನಂತರ ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು.

ವಿದ್ಯಾರ್ಥಿ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ, ಶೂ & ಸಾಕ್ಸ್, ಶುಚಿ ಸಂಭ್ರಮ ಕಿಟ್, ಲೇಖನ ಸಾಮಗ್ರಿಗಳು ಮುಂತಾದ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

**ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ** ವತಿಯಿಂದ ಒಟ್ಟು 284 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿದ್ದು, ಈ ಪೈಕಿ 225 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ ಹಾಗೂ 59 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳ ಪೈಕಿ 33 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲಾಗುತ್ತಿದ್ದು, ವಿವಿಧ ಹಂತಗಳಲ್ಲಿ ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ. ಈ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ, ಶೂ ಮತ್ತು ಸಾಕ್ಸ್, ಶುಚಿ ಸಂಭ್ರಮ ಕಿಟ್, ಲೇಖನ ಸಾಮಗ್ರಿಗಳು, ಟೂ-ಟಯರ್ ಕಾಟ್, ಹಾಸಿಗೆ-ಹೊದಿಕೆ, ಡೈನಿಂಗ್ ಟೇಬಲ್, ಇತ್ಯಾದಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**ಯಡಿ ಕಾರ್ಯನಿರ್ವಹಿಸುತ್ತಿರುವ 2597 ವಿದ್ಯಾರ್ಥಿನಿಲಯಗಳ ಪೈಕಿ 1634 ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಲ್ಲಿ, 234 ವಿದ್ಯಾರ್ಥಿನಿಲಯಗಳು ಉಚಿತ ಕಟ್ಟಡಗಳಲ್ಲಿ ಹಾಗೂ 729 ವಿದ್ಯಾರ್ಥಿನಿಲಯಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುತ್ತವೆ. ಸ್ವಂತ ಕಟ್ಟಡ ಲಭ್ಯವಿಲ್ಲದ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರುವ ಬಾಡಿಗೆ ಕಟ್ಟಡಗಳನ್ನು ಬಾಡಿಗೆಗೆ ಪಡೆಯಲಾಗಿರುತ್ತದೆ. ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಿಗೆ ಅನುದಾನದ ಲಭ್ಯತೆಯನುಸಾರ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ನಿಲಯಾರ್ಥಿಗಳಿಗೆ ಉಚಿತ ಊಟ, ವಸತಿ ಸೌಲಭ್ಯದೊಂದಿಗೆ ಶುಚಿ ಸಂಭ್ರಮ ಕಿಟ್, ಲೇಖನ ಸಾಮಗ್ರಿ, ಜಮಖಾನ, ಬೆಡ್ ಶೀಟ್, ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ನೈಟ್ ಡ್ರೆಸ್, ಟ್ರ್ಯಾಕ್ ಸೂಟ್ ಮತ್ತು ಗ್ರಂಥಾಲಯಗಳ ವ್ಯವಸ್ಥೆ ಮತ್ತು ಇತ್ಯಾದಿ ಎಲ್ಲಾ ಸೌಕರ್ಯಗಳನ್ನು ಕಲ್ಪಿಸಲಾಗುತ್ತಿದೆ.

**ಸಕಇ 670 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**